# JAIN COLLEGE

Address: #463/465, 18th Main Road, SS Royal, 80 Feet Road
Rajarajeshwari Nagar, Bangalore - 560 098

**Date:** **SUBJECT: KANNADA**

**I PUC**
**MOCK**

**Time Duration: 3 Hrs 15 Mins** **Total Marks: 100**

**ಸೂಚನೆಗಳು :**

- ಒಂದುವಾಕ್ಯದ ಎಲ್ಲಾ ಪ್ರಶ್ನೆಗಳಿಗೆ ಕಡ್ಡಾಯವಾಗಿ ಉತ್ತರಿಸಿ
- ಪ್ರತಿಯೊಂದು ವಿಭಾಗದಲ್ಲಿ ನೀಡಲಾಗಿರುವ ಆಯ್ಕೆಗಳಿಗೆ ಅನುಗುಣವಾಗಿ ಉತ್ತರಿಸಿ.
- ಹೆಚ್ಚುವರಿ ಪ್ರಶ್ನೋತ್ತರಗಳನ್ನು ಬರೆಯದಂತೆ ಗಮನವಹಿಸಿ.
- ಪ್ರಶ್ನೆಗಳ ಸಂಖ್ಯೆಯನ್ನು ತಪ್ಪಿಲ್ಲದಂತೆ ನಮೂದಿಸಿ.

**I ಒಂದು ವಾಕ್ಯದಲ್ಲಿ ಉತ್ತರಿಸಿ.** **10X1=10**

1. ಜಗಪ್ರಳಯ ಯಾವಾಗ ಸಂಭವಿಸುತ್ತದೆ?
2. ಘಟ್ಟಿವಾಳಯ್ಯನ ಅಂಕಿತ ಯಾವುದು?
3. ಶಿಶುಮಕ್ಕಳು ಹೂ ತರಲು ಎಲ್ಲಿಗೆ ಹೋಗಿದ್ದರು?
4. ಎಂದೂ ಕರಗದ ಮೂಲಧನ ಯಾವುದು?
5. ಹುಡುಗನಿಗೆ 'ಮಹಾತ್ಮಗಾಂಧಿ' ಎಂಬ ಹೆಸರನ್ನು ಇಟ್ಟವರು ಯಾರು?
6. ಮಾಸ್ತರರ ಅವಳಿ ಮಕ್ಕಳ ಸಾವು ಹೇಗಾಯಿತು?
7. ಮಹೇಂದ್ರನು ಯಾವ ಯಜ್ಞವನ್ನು ಕೈಗೊಂಡಿದ್ದನು?
8. ಬೋಳೇಶಂಕರನ ಅಣ್ಣ ಅತ್ತಿಗೆಯರಿಗೆ ಉಂಟಾದ ಆಸೆ ಯಾವುದು?
9. ಸೈನಿಕರು ಯಾವುದಕ್ಕೆ ಜಯವಾಗಲಿ ಎಂದು ಹಾಡಿದರು?
10. ಅಣ್ಣಂದಿರಿಗೆ ಯಾವ ರೋಗ ಹಿಡಿದಿದೆ ಎಂದು ಬೋಳೇಶಂಕರ ಹೇಳುತ್ತಾನೆ

**II ಅ. ನಾಲ್ಕು ಪ್ರಶ್ನೆಗಳಿಗೆ <u>ಎರಡು</u> ಮೂರು ವಾಕ್ಯದಲ್ಲಿ ಉತ್ತರಿಸಿ.** **4X2=8**

11. ದುರ್ಯೋಧನ ತನ್ನ ಮಗನ ಶವವನ್ನು ಕಂಡು ಹೇಗೆ ವ್ಯಥೆಪಡುತ್ತಾನೆ?
12. ಕಾಲು ಮತ್ತು ದೇಹವನ್ನು ಯಾವುದಕ್ಕೆ ಹೋಲಿಸಲಾಗಿದೆ.
13. ಮೂರ್ಛಿತಳಾದ ಸೀತೆಯನ್ನು ಲಕ್ಷ್ಮಣ ಹೇಗೆ ಉಪಚರಿಸಿದನು?
14. ಸರಸ್ವತಿಯ ಸಚಿವ ಮಂಡಲದ ಸದಸ್ಯರು ಯಾರು?
15. ಅಮ್ಮಿಯ ಪಾಲಿಗೆ ನಮಾಜ್ ಮತ್ತು ಈದ್ ಎಂದರೆ ಯಾವುವು?

**ಆ. ಕೆಳಗಿನ ಪ್ರಶ್ನೆಗಳಲ್ಲಿ <u>ಮೂರಕ್ಕೆ</u> ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ.** **3X2=6**

16. ವೈಧ್ಯಾಧಿಕಾರಿಗೆ ಹುಡುಗ ಹೇಗೆ ಕಂಡನು?
17. ಜ್ಯೋತಿಷ್ಯದ ಪ್ರಕಾರ ಗ್ರಹಗಳೆಷ್ಟು? ಅವುಗಳು ಯಾವುವು?
18. ನೇಪಾಳದ ವೈಮಾನಿಕ ಸಾರಿಗೆ ವ್ಯವಸ್ಥೆ ಹೇಗಿದೆ?
19. ರೈತ ಚಳವಳಿಗಳು ಎಲ್ಲೆಲ್ಲಿ ನಡೆದವು?

**ಇ. ಕೆಳಗಿನ ಪ್ರಶ್ನೆಗಳಲ್ಲಿ <u>ಮೂರಕ್ಕೆ</u> ಮಾತ್ರ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ.** **3X2=6**

20.ಸಾಹ್ಕಾರಣ್ಣನು ತನ್ನ ಸಹೋದರರಿಗೆ ಆಸ್ತಿಯನ್ನು ಹೇಗೆ ಹಂಚಿದ?

21.ಸೈತಾನನಿಗೆ ಮೊದಲ ಪಂಕ್ತಿಯ ಊಟ ನಿರಾಕರಿಸಿದ್ದೇಕೆ?

22.ಸೈತಾನನು ಮೂರು ಪಿಶಾಚಿಗಳನ್ನು ಭೂಲೋಕಕ್ಕೆ ಕಳುಹಿಸಿದ್ದೇಕೆ?

23.ರಾಜ ಕುಮಾರಿಯ ಹೊಟ್ಟೆ ನೋವನ್ನು ವಾಸಿಮಾಡುವವರಿಗೆ ಏನೇನು ಬಹುಮಾನ ಕೊಡುವುದಾಗಿ ಡಂಗೂರ ಸಾರಿಸುತ್ತಾರೆ?

**III ಅ. ಕೆಳಗಿನ ಯಾವುದಾದರು ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸ್ವಾರಸ್ಯ ಬರೆಯಿರಿ. 2X3=6**

24.ಜನನೀ ಸ್ತನ್ಯಮನುಂಡೆ ನಾಂ ಬಳಿಕೆ ನೀಂ.

25.ಎಲ್ಲರಿಗೂ ದಕ್ಕುವ ಎಲಚಿಯಾಗು

26.ಯಾವ ಕುಲ? ಯಾವ ಮತ?

**ಆ. ಕೆಳಗಿನ ಯಾವುದಾದರೂ <u>ಒಂದು</u> ವಾಕ್ಯವನ್ನು ಕುರಿತು ಸಂದರ್ಭ ಸ್ವಾರಸ್ಯ ಬರೆಯಿರಿ. 1X3=3**

27.ನನ್ನ ದೇಹದ ಮೇಲೆ ಒಂದು ಮುಷ್ಟಿ ರಾಗಿ ಸುರಿಯಿರಿ.

28.ರಸ್ತೆಯಿಂದ ಏಳುವ ಧೂಳು ನನ್ನ ತಲೆಗೆ ತಾಗಬೇಕು

**ಇ. ಕೆಳಗಿನ ಯಾವುದಾದರು <u>ಒಂದು</u> ವಾಕ್ಯವನ್ನು ಕುರಿತು ಸಂದರ್ಭ ಸ್ವಾರಸ್ಯ ಬರೆಯಿರಿ. 1X3=3**

29.ಹೆಣ್ಣಿದ್ದ ಮನೆಯ ಸೌಭಾಗ್ಯವೇ ಬೇರೆ.

30.ದಾರಿ ತಪ್ಪಿದವರಿಗೆ ಗಾದೆ ಬಲ್ಲವರು ಬುದ್ದಿ ಹೇಳುತ್ತಾರೆ.

**IV ಅ. ಕೆಳಗಿನ ಯಾವುದಾದರು <u>ಮೂರು</u> ಪ್ರಶ್ನೆಗಳಿಗೆ ಐದಾರು ವಾಕ್ಯದಲ್ಲಿ ಉತ್ತರಿಸಿ. 3X4=12**

31.ಕರ್ಣನ ಉದಾತ್ತ ಗುಣಗಳನ್ನು ದುರ್ಯೋಧನ ಹೇಗೆ ಕೊಂಡಾಡಿದ್ದಾನೆ?

32.ಮಾದಪ್ಪ ತನ್ನ ಶಿಶು ಮಕ್ಕಳನ್ನು ಪರೀಕ್ಷಿಸಲು ಕಾರಣಗಳೇನು?

33.ಸ್ವಾಭಿಮಾನದ ನಾಡನ್ನು ಕಟ್ಟುವಲ್ಲಿ ಕವಿಯು ಹೊಂದಿರುವ ಆಶಯಗಳನ್ನು ವಿವರಿಸಿ.

34.'ಮತ್ತೆ ಸೂರ್ಯ ಬರುತ್ತಾನೆ' ಕವಿತೆಯ ಆಶಯವನ್ನು ಚರ್ಚಿಸಿ.

**ಆ. ಕೆಳಗಿನ ಯಾವುದಾದರು ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯದಲ್ಲಿ ಉತ್ತರಿಸಿ. 2X4=8**

35.ಹಳ್ಳಿಯ ಜನ ಕೈಯಲ್ಲೇ ಮುದ್ದೆ ತಿನ್ನುವ ಚಿತ್ರಣವನ್ನು ವಿವರಿಸಿ.

36.ಶಾಸ್ತ್ರಿ ಮಾಸ್ತರರ ವ್ಯಕ್ತಿತ್ವವನ್ನು ನಿರೂಪಿಸಿ.

37.ನಮ್ಮ ಆರೋಗ್ಯದ ಮೇಲೆ ವಿದೇಶಿ ಹೋಟಲ್‌ಗಳು ನಡೆಸಿದ ದಾಳಿಗಳೇನು?

**ಇ. ಕೆಳಗಿನ ಯಾವುದಾದರು <u>ಎರಡು</u> ಪ್ರಶ್ನೆಗಳಿಗೆ ಐದಾರು ವಾಕ್ಯದಲ್ಲಿ ಉತ್ತರಿಸಿ. 2X4=8**

38.ಬೋಳೇಶಂಕರ ಮತ್ತು ಅವನ ಅಣ್ಣಂದಿರನ್ನು ಭಾಗವತರು ಹೇಗೆ ಪರಿಚಯಿಸಿದ್ದಾರೆ?

39.ತನ್ನ ಕನಸನ್ನು ಕುರಿತು ಬೋಳೇಶಂಕರ ಮಂತ್ರಿಗೆ ಹೇಳಿದ್ದೇನು?

40. ಸೈತಾನನು ತನ್ನ ಪರಿಚಯ ಮಾಡಿಕೊಂಡ ಬಗೆ ಹಾಗೂ ಬಂದಂಥ ಕಾರಣವನ್ನು ತಿಳಿಸಿ.

**V ಅ. ಕೆಳಗಿನ ಯಾವುದಾದರು <u>ಒಂದು</u> ಪದ್ಯದ ಭಾವಾರ್ಥ ಬರೆಯಿರಿ. 1X5=5**

41. ನೀನುಳ್ಳೊಡುಂಟು ರಾಜ್ಯ
ನೀನುಳ್ಳೊಡೆ ಪಟ್ಟಮುಂಟು ಬೆಳ್ಗೊಡೆಯುಂಟಯ್
ನೀನುಳ್ಳೊದುಂಟು ಪೀಳಿಗೆ

ನೀನಿಲ್ಲದಿವೆಲ್ಲ ಮಾಳವೆ ಅಂಗಾಧಿಪತಿ

ಅಥವಾ

42. ಬಿರುಗಾಳಿ ಪೊಡೆಯಲ್ಕೆ ಕಂಪಿಸಿ ಫಲಿತ ಕದಳಿ
ಮುರಿದಿಳೆಗೊರಗುವಂತೆ ಲಕ್ಷ್ಮಣನ ಮಾತು ಕಿವಿ

ದೆರೆಗೆ ಬೀಳದ ಮುನ್ನ ಹಮ್ಮೈಸಿ ಬಿದ್ದಳಂಗನೆ ಧರೆಗೆ ನಡುನಡುಗುತ
ಮರೆದಳಂಗೋಪಾಂಗಮುಂ ಬಳಿಕ ಸೌಮಿತ್ರಿ
ಮರಗಿ ತಣ್ಣೀರ್ಗರೆದಳು ಪತ್ರದಿಂ ಕೊಡೆವಿಡಿದು
ಸೆರಗಿಂದೆ ಬೀಸಿ ರಾಮನ ಸೇವೆಸಂದುದೇ ತನಗೆಂದು ರೋಧಿಸಿದನು.

**VI ಭಾಷಾಭ್ಯಾಸ**

**ಆ. ಕೆಳಗಿನ ಆರು ಪ್ರಶ್ನೆಗಳಿಗೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ.** **2X6=12**

43. ಅರ್ಥ ಬರೆಯಿರಿ – ಅಹಿಕೇತನ, ವದನ
44. ವಿರುದ್ಧ ಪದ – ಉಚಿತ, ಆರೋಗ್ಯ
45. ಸಮಾನಾರ್ಥ ಬರೆಯಿರಿ – ಅರಿ, ಭೂಮಿ
46. ಎರಡು ಅನ್ಯದೇಶ್ಯ ಪದಗಳನ್ನು ಬರೆಯಿರಿ.
47. ತದ್ಭವಗಳನ್ನು ಬರೆಯಿರಿ – ಪೃಥಾ, ಮೃಗ
48. ನುಡಿಗಟ್ಟುಗಳನ್ನು ವಾಕ್ಯರೂಪದಲ್ಲಿ ಬರೆಯಿರಿ – ಕೆಂಡಕಾರು, ಕಾಲಿಗೆ ಬುದ್ಧಿ ಹೇಳು.
49. ಬಿಡಿಸಿ ಬರೆಯಿರಿ – ಭವದ್ವಿಕ್ರಮ, ರಾವಣಾರಿ

**ಇ. ಈ ಕೆಳಗಿನ ಯಾವುದಾದರು ಒಂದನ್ನು ಕುರಿತು ಪ್ರಬಂಧ ಬರೆಯಿರಿ.** **1X5=5**

50. ಜನಪದ ಸಾಹಿತ್ಯ ಸಂಸ್ಕೃತಿಗಳೇ ನಾಡಿನ ಶ್ರೀಮಂತಿಕೆ.
51. ಮಹಿಳಾ ಸಂರಕ್ಷಣೆ ನಮ್ಮೆಲ್ಲರ ಹೊಣೆ.

**ಈ. ಕೆಳಗಿನವುಗಳಲ್ಲಿ ಒಂದಕ್ಕೆ ಉತ್ತರಿಸಿ.** **1X4=4**

52. ಬರಗಾಲ ಪೀಡಿತ ಜಿಲ್ಲೆ ಬೀದರ್‌ಗೆ ಅಗತ್ಯ ಅನುಕೂಲತೆಗಳನ್ನು ಒದಗೊಸುವಂತೆ ಮುಖ್ಯಮಂತ್ರಿಯವರಿಗೆ ಪತ್ರ ಬರೆಯಿರಿ.

ಅಥವಾ

53. ಕಾಲೇಜಿನಲ್ಲಿ ಆಚರಿಸಿದ ಕನ್ನಡ ರಾಜ್ಯೋತ್ಸವದ ಕುರಿತು ಕುರಿತು ಗೆಳೆಯ/ಗೆಳತಿಗೆ ಪತ್ರ ಬರೆಯಿರಿ.

**ಉ. ಒಂದು ಗಾದೆಯನ್ನು ವಿಸ್ತರಿಸಿ ಬರೆಯಿರಿ.** **1X4=4**

54. ತಾಯಿಗಿಂತ ಬಂಧುವಿಲ್ಲ ಉಪ್ಪಿಗಿಂತ ರುಚಿಯಿಲ್ಲ
55. ಮಾತು ಬೆಳ್ಳಿ ಮೌನ ಬಂಗಾರ.

********************************